# ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ

ರಾಜ್ಯ ಕೇಂದ್ರ ಕಾರ್ಯಾಲಯ, #39, ಶಾಂತಿಗೃಹ, ಅರಮನೆ ರಸ್ತೆ, ಬೆಂಗಳೂರು – 560 001

ದೂ: (ಸ್ಕೌಟ್ ವಿಭಾಗ)+91-80-2226 0017;(ಗೈಡ್ ವಿಭಾಗ) +91-80-2226 7470;ಫ್ಯಾಕ್ಸ್; +91-80-2226 1047

ಮಿಂಚಂಚೆ: info@bsgkarnataka.org ಅಂತರ್ಜಾಲ: www.bsgkarnataka.org


**ಸಂಖ್ಯೆ: ಬಿಎಸ್‌ಜಿ/ಎಸ್‌ಹೆಚ್‌ಕ್ಯೂ/464 /2026-27** **ದಿನಾಂಕ:16.06.2026**

ಜಿಲ್ಲಾ ಕಾರ್ಯದರ್ಶಿ
ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್
ಜಿಲ್ಲಾ ಸಂಸ್ಥೆ, ದಕ್ಷಿಣ ಕನ್ನಡ ಜಿಲ್ಲೆ

ಮಾನ್ಯರೆ,

ವಿಷಯ:- ವಿಪತ್ತು ನಿರ್ವಹಣಾ ತರಬೇತಿ ಪಡೆದಿರುವ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ರೋವರ್ಸ್-ರೇಂಜರ್ಸ್‌ಗಳಿಗೆ ದಿನಾಂಕ:10.07.2026ರಂದು "ವಿಪತ್ತು ನಿರ್ವಹಣೆ ಹಾಗೂ ಪ್ರಾಯೋಗಿಕ ಪ್ರದರ್ಶನ (ಮಾಕ್ ಡ್ರಿಲ್) ಕಾರ್ಯಗಾರ"ವನ್ನು ಏರ್ಪಡಿಸಿರುವ ಕುರಿತು.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರ, ರಾಷ್ಟ್ರೀಯ ಮತ್ತು ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಬೆಂಗಳೂರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರಾಜ್ಯ ಸಂಸ್ಥೆಯ ಸಹಕಾರದೊಂದಿಗೆ "ಯುವ ಆಪದ್ ಮಿತ್ರ ಯೋಜನೆಯ ಅಡಿಯಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರೋವರ್ಸ್-ರೇಂಜರ್ಸ್‌ಗಳಿಗೆ ದಿನಾಂಕ:14 ರಿಂದ 20 ಸೆಪ್ಟೆಂಬರ್ 2025ರವರೆಗೆ ಜಿಲ್ಲಾ ತರಬೇತಿ ಕೇಂದ್ರ, ಪಿಲಿಕುಳ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಿಪತ್ತ ನಿರ್ವಹಣಾ ತರಬೇತಿ ಶಿಬಿರವನ್ನು ಆಯೋಜಿಸಲಾಗಿತ್ತು. 242 ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರೋವರ್ಸ್-ರೇಂಜರ್ಸ್‌ಗಳು ತರಬೇತಿಯನ್ನು ಪಡೆದಿರುತ್ತಾರೆ.

ಈ ವಿಪತ್ತ ನಿರ್ವಹಣಾ ತರಬೇತಿ ಶಿಬಿರವನ್ನು ಪಡೆದ ತಮ್ಮ ಜಿಲ್ಲೆಯ 242 ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರೋವರ್ಸ್-ರೇಂಜರ್ಸ್‌ಗಳಿಗೆ **ದಿನಾಂಕ:10.07.2026ರಂದು** ಜಿಲ್ಲಾ ತರಬೇತಿ ಕೇಂದ್ರ, ಪಿಲಿಕುಳ, ದಕ್ಷಿಣ ಕನ್ನಡ ಜಿಲ್ಲೆ ಇಲ್ಲಿ **"ವಿಪತ್ತು ನಿರ್ವಹಣೆ ಹಾಗೂ ಪ್ರಾಯೋಗಿಕ ಪ್ರದರ್ಶನ (ಮಾಕ್ ಡ್ರಿಲ್) ಕಾರ್ಯಗಾರ"ವನ್ನು** ಆಯೋಜಿಸಲಾಗಿದೆ.

ತಾವು ದಯಮಾಡಿ, ತಮ್ಮ ಜಿಲ್ಲೆಯ 242 ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರೋವರ್ಸ್-ರೇಂಜರ್ಸ್‌ಗಳಿಗೆ ಕಾರ್ಯಗಾರಕ್ಕೆ ನಿಯೋಜಿಸಬೇಕಾಗಿ ಮತ್ತು ಜಿಲ್ಲಾ ತರಬೇತಿ ಕೇಂದ್ರವನ್ನು ಕಾಯ್ದಿರಿಸಬೇಕಾಗಿ ಕೋರಿದೆ. ಭಾಗವಹಿಸುವ ರೋವರ್ಸ್-ರೇಂಜರ್ಸ್‌ಗಳಿಗೆ ಊಟೋಪಚಾರಕ್ಕಾಗಿ ರಾಜ್ಯ ಸಂಸ್ಥೆಯಿಂದ ಅನುದಾನ ಬಿಡುಗಡೆ ಮಾಡಲಾಗುವುದು. ತಾವು ಕಾರ್ಯಗಾರದ ಪೂರ್ವ ಸಿದ್ಧತೆಗಳನ್ನು ಮಾಡಬೇಕಾಗಿ ಈ ಮೂಲಕ ಕೋರಲಾಗಿದೆ.

ಸ್ಕೌಟ್-ಗೈಡ್ ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

(ಕೆ. ಗಂಗಪ್ಪಗೌಡ)
ರಾಜ್ಯ ಕಾರ್ಯದರ್ಶಿ

**ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ:**

1. ಜಿಲ್ಲಾ ಮುಖ್ಯ ಆಯುಕ್ತರು, ಭಾ.ಸ್ಕೌ&ಗೈ, ದಕ್ಷಿಣ ಕನ್ನಡ ಜಿಲ್ಲೆ
2. ಶ್ರೀಮತಿ ಬಿ.ವಿ. ಲತಾ, ಸ್ಟೇಟ್ ಪ್ರಾಜೆಕ್ಟ್ ಮ್ಯಾನೇಜರ್, ಯುವ ಆಪದ್ ಮಿತ್ರ
3. ಎಎಸ್‌ಒಸಿ, ಭಾ.ಸ್ಕೌ&ಗೈ, ದಕ್ಷಿಣ ಕನ್ನಡ ಜಿಲ್ಲೆ